**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 67 ಟಿಇಸಿ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಸಚಿವಾಲಯ-2, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:26-08-2013.

**ಇಂದ:**

**"ಅತೀ ಜರೂರು"**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು-560 001.

ಗೆ:

ತಾಂತ್ರಿಕ ಶಿಕ್ಷಣ ನಿರ್ದೇಶಕರು,
ಬೆಂಗಳೂರು.

ಮಾನ್ಯರೆ,

ವಿಷಯ: 2012-13ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ. ಕೋರ್ಸಿನಲ್ಲಿ ಖಾಲಿ ಉಳಿದಿರುವ ಸೀಟುಗಳನ್ನು 2013-14ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಮೂಲಕ ಭರ್ತಿ ಮಾಡಲು ವಿವರಗಳನ್ನು ನೀಡದಿರುವ ಕುರಿತು.

((o))

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2012-13ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ. ಕೋರ್ಸಿನ ಪ್ರವೇಶಾತಿ ಪ್ರಕ್ರಿಯೆ ಮುಗಿದ ನಂತರ ಉಳಕೆಯಾದ ಸೀಟುಗಳನ್ನು 2013-14ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಮೂಲಕ ಡಿಪ್ಲೋಮಾಧಾರಕರುಗಳಿಂದ ಭರ್ತಿ ಮಾಡಲು ಸಂಬಂಧಪಟ್ಟ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರುಗಳು ಉಳಕೆ ಸೀಟುಗಳನ್ನು ಸರ್ಕಾರಕ್ಕೆ ಅಧ್ಯರ್ಪಿಸಿರುವುದಿಲ್ಲ. ಇದರಿಂದ ಡಿಪ್ಲೋಮಾಧಾರಕರುಗಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಪ್ರವೇಶ ಪಡೆಯುವ ಅವಕಾಶದಿಂದ ವಂಚಿತರಾಗಿರುತ್ತಾರೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಆದುದರಿಂದ, ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2012-13ನೇ ಸಾಲಿನಲ್ಲಿ ಪ್ರಥಮ ವರ್ಷದ ಇಂಜಿನಿಯರಿಂಗ್ ಕೋರ್ಸಿನಲ್ಲಿ ಖಾಲಿ ಉಳಿದ ಸೀಟುಗಳನ್ನು 2013-14ನೇ ಶೈಕ್ಷಣಿಕ ಸಾಲಿನಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಭರ್ತಿ ಮಾಡುವ ಸಲುವಾಗಿ ಸರ್ಕಾರಕ್ಕೆ ಏಕೆ ಅಧ್ಯರ್ಪಿಸಿರುವುದಿಲ್ಲ ಎಂಬ ಬಗ್ಗೆ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಂದ ವಿವರಣೆ ಪಡೆದು ಇಂದೇ ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ ಇಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಪ್ರವೇಶಾತಿಗೆ ಡಿಪ್ಲೋಮಾಧಾರಕರುಗಳಿಂದ ಹೆಚ್ಚಿನ ಬೇಡಿಕೆ ಇದ್ದುದಾಗಿ ತಿಳಿದು ಬಂದಿದೆ. ಈ ಕಾಲೇಜಿನ ಪ್ರಾಂಶುಪಾಲರು ಕಳೆದ ಸಾಲಿನ ಉಳಕೆ ಸೀಟುಗಳನ್ನು ಅಧ್ಯರ್ಪಣೆ ಮಾಡದಿರುವುದರಿಂದ ಡಿಪ್ಲೋಮಾಧಾರಕರುಗಳು ಲ್ಯಾಟರಲ್ ಎಂಟ್ರಿ ಮೂಲಕ ಇಂಜಿನಿಯರಿಂಗ್ ಸೀಟುಗಳನ್ನು ಪಡೆಯಲು ಅವಕಾಶ ಕಲ್ಪಿಸಲು ಸಾಧ್ಯವಾಗಿರುವುದಿಲ್ಲ. ಆದುದರಿಂದ, ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ ಇವರ ವಿರುದ್ಧ ಏಕೆ ಶಿಸ್ತು ಕ್ರಮ ಜರುಗಿಸಬಾರದೆಂಬ ಬಗ್ಗೆ ಅವರಿಗೆ ನೋಟೀಸ್ ಜಾರಿ ಮಾಡಿ ಸದರಿಯವರಿಂದ ವಿವರಣೆ ಪಡೆದು, ನಿಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ಇಂದೇ ಸರ್ಕಾರಕ್ಕೆ ವರದಿಯನ್ನು ಕಳುಹಿಸಿಕೊಡುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

26/8/13

(ಬಿ.ನಾಗಭೂಷಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

**ಈ ಕಛೇರಿ ಹಿಂಬರಹ ಸಂಖ್ಯೆ:** ಡಿಟಿಇ 10 ಎಸಿಎಂ(1) 2013-14 ದಿನಾಂಕ: 26-08-2013.

2012-13ನೇ ಸಾಲಿನಲ್ಲಿ ತಮ್ಮ ಸಂಸ್ಥೆಗಳಲ್ಲಿ ಖಾಲಿ ಇರುವ ಸೀಟುಗಳನ್ನು 2013-14ನೇ ಸಾಲಿನಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಭರ್ತಿ ಮಾಡುವ ಸಲುವಾಗಿ ಸರ್ಕಾರಕ್ಕೆ ಏಕೆ ಅಧ್ಯರ್ಪಿಸಿರುವುದಿಲ್ಲ ಎಂಬುದರ ಬಗ್ಗೆ ಸ್ಪಷ್ಟವಾದ ವಿವರಣೆಯನ್ನು ಈ ಪತ್ರ ತಲುಪಿದ ಕೂಡಲೇ ನಿರ್ದೇಶನಾಲಯದ ಇ-ಮೇಲ್ dteacm@hotmail.com ಗೆ ಇಂದೇ ಕಳುಹಿಸಲು ಸೂಚಿಸಲಾಗಿದೆ.

**ನಿರ್ದೇಶಕರು**

26/8/13

**ಇವರಿಗೆ,**

ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ

**ಪ್ರತಿ:-** ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.

**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 67 ಟಿಇಸಿ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಸಚಿವಾಲಯ-2, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:26-08-2013.

**"ಅತೀ ಜರೂರು"**

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು-560 001.

Acm

**ಗೆ:**

ತಾಂತ್ರಿಕ ಶಿಕ್ಷಣ ನಿರ್ದೇಶಕರು,
ಬೆಂಗಳೂರು.

ಮಾನ್ಯರೆ,

ವಿಷಯ: 2012-13ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ. ಕೋರ್ಸಿನಲ್ಲಿ ಖಾಲಿ ಉಳಿದಿರುವ ಸೀಟುಗಳನ್ನು 2013-14ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಮೂಲಕ ಭರ್ತಿ ಮಾಡಲು ವಿವರಗಳನ್ನು ನೀಡದಿರುವ ಕುರಿತು.

((o))

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2012-13ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ. ಕೋರ್ಸಿನ ಪ್ರವೇಶಾತಿ ಪ್ರಕ್ರಿಯೆ ಮುಗಿದ ನಂತರ ಉಳಿಕೆಯಾದ ಸೀಟುಗಳನ್ನು 2013-14ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಮೂಲಕ ಡಿಪ್ಲೋಮಾಧಾರಕರುಗಳಿಂದ ಭರ್ತಿ ಮಾಡಲು ಸಂಬಂಧಪಟ್ಟ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರುಗಳು ಉಳಿಕೆ ಸೀಟುಗಳನ್ನು ಸರ್ಕಾರಕ್ಕೆ ಅಧ್ಯರ್ಪಿಸಿರುವುದಿಲ್ಲ. ಇದರಿಂದ ಡಿಪ್ಲೋಮಾಧಾರಕರುಗಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಪ್ರವೇಶ ಪಡೆಯುವ ಅವಕಾಶದಿಂದ ವಂಚಿತರಾಗಿರುತ್ತಾರೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಆದುದರಿಂದ, ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2012-13ನೇ ಸಾಲಿನಲ್ಲಿ ಪ್ರಥಮ ವರ್ಷದ ಇಂಜಿನಿಯರಿಂಗ್ ಕೋರ್ಸಿನಲ್ಲಿ ಖಾಲಿ ಉಳಿದ ಸೀಟುಗಳನ್ನು 2013-14ನೇ ಶೈಕ್ಷಣಿಕ ಸಾಲಿನಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಭರ್ತಿ ಮಾಡುವ ಸಲುವಾಗಿ ಸರ್ಕಾರಕ್ಕೆ ಏಕೆ ಅಧ್ಯರ್ಪಿಸಿರುವುದಿಲ್ಲ ಎಂಬ ಬಗ್ಗೆ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಂದ ವಿವರಣೆ ಪಡೆದು ಇಂದೇ ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ ಇಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ಪ್ರವೇಶಾತಿಗೆ ಡಿಪ್ಲೋಮಾಧಾರಕರುಗಳಿಂದ ಹೆಚ್ಚಿನ ಬೇಡಿಕೆ ಇದ್ದುದಾಗಿ ತಿಳಿದು ಬಂದಿದೆ. ಈ ಕಾಲೇಜಿನ ಪ್ರಾಂಶುಪಾಲರು ಕಳೆದ ಸಾಲಿನ ಉಳಿಕೆ ಸೀಟುಗಳನ್ನು ಅಧ್ಯರ್ಪಣೆ ಮಾಡದಿರುವುದರಿಂದ ಡಿಪ್ಲೋಮಾಧಾರಕರುಗಳು ಲ್ಯಾಟರಲ್ ಎಂಟ್ರಿ ಮೂಲಕ ಇಂಜಿನಿಯರಿಂಗ್ ಸೀಟುಗಳನ್ನು ಪಡೆಯಲು ಅವಕಾಶ ಕಲ್ಪಿಸಲು ಸಾಧ್ಯವಾಗಿರುವುದಿಲ್ಲ. ಆದುದರಿಂದ, ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ ಇವರ ವಿರುದ್ಧ ಏಕೆ ಶಿಸ್ತು ಕ್ರಮ ಜರುಗಿಸಬಾರದೆಂಬ ಬಗ್ಗೆ ಅವರಿಗೆ ನೋಟೀಸ್ ಜಾರಿ ಮಾಡಿ ಸದರಿಯವರಿಂದ ವಿವರಣೆ ಪಡೆದು, ನಿಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ಇಂದೇ ಸರ್ಕಾರಕ್ಕೆ ವರದಿಯನ್ನು ಕಳುಹಿಸಿಕೊಡುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

26/8/13

(ಬಿ.ನಾಗಭೂಷಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ದಿನಾಂಕ: 26-08-2013.

**ಈ ಕಛೇರಿ ಹಿಂಬರಹ ಸಂಖ್ಯೆ:** ಡಿಟಿಇ 10 ಎಸಿಎಂ(1) 2013-14

ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿ ತಮ್ಮ ವಿರುದ್ಧ ಏಕೆ ಶಿಸ್ತು ಕ್ರಮ ಜರುಗಿಸಬಾರದೆಂಬ ಬಗ್ಗೆ ಈ ನೋಟೀಸ್ ತಲುಪಿದ ತಕ್ಷಣ ನಿಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ನಿರ್ದೇಶನಾಲಯಕ್ಕೆ ವರದಿಯನ್ನು ನಿರ್ದೇಶನಾಲಯದ ಇ-ಮೇಲ್ dteacm@hotmail.com ಗೆ ಇಂದೇ ಕಳುಹಿಸಲು ಸೂಚಿಸಲಾಗಿದೆ.

ನಿರ್ದೇಶಕರು
26/8/13

ಇವರಿಗೆ,

ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್, ಕಾರವಾರ

**ಪ್ರತಿ:-** ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.